**All India Radio: Bangalore**
**National Bulletin In Kannada**
**12.02.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**12.02.2025 13.10 p.m.**
****************

ಮುಖ್ಯಾಂಶಗಳು

೧. ಮಾರ್ಸಿಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರೆನ್, ಭಾರತದ ರಾಯಭಾರ ಕಚೇರಿ ಉದ್ಘಾಟನೆ ಸೇರಿ ಹಲವು ಕಾರ್ಯಕ್ರಮಗಳಲ್ಲಿ ಭಾಗಿ

೨. ಇಂದು ಸಂತ ರವಿದಾಸ ಜಯಂತಿ; ರಾಷ್ಟ್ರಪತಿ ದ್ರೌಪದಿ ಮುರ್ಮು ಸೇರಿ ಹಲವು ಗಣ್ಯರಿಂದ ಜನತೆಗೆ ಶುಭಾಶಯ

೩. ನಿವ್ವಳ ನೇರ ತೆರಿಗೆ ಸಂಗ್ರಹ ೧೭.೭೮ ಲಕ್ಷ ಕೋಟಿ ರೂಪಾಯಿಗೆ ಏರಿಕೆ

೪. ಅಹಮದಾಬಾದ್ ನಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವೆ ೩ನೇ ಹಾಗೂ ಅಂತಿಮ ಏಕದಿನ ಪಂದ್ಯ

*****************

ಪ್ಯಾರಿಸ್ ನಲ್ಲಿ ಉನ್ನತ ಮಟ್ಟದ ಮಾತುಕತೆಗಳ ಸರಣಿಯ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರೆನ್ ಅವರೊಂದಿಗೆ ಮಾರ್ಸಿಲೆಗೆ ಆಗಮಿಸಿದ್ದಾರೆ.

ಮಾರ್ಸಿಲೆಯಲ್ಲಿರುವ ಭಾರತೀಯ ಸಮುದಾಯವು ಪ್ರಧಾನಮಂತ್ರಿ ಅವರಿಗೆ ಆತ್ಮೀಯ ಮತ್ತು ಉತ್ಸಾಹಭರಿತ ಸ್ವಾಗತವನ್ನು ನೀಡಿದೆ.

ತಮ್ಮ ಬಲವಾದ ಪಾಲುದಾರಿಕೆಯನ್ನು ಮುಂದುವರಿಸುತ್ತಾ, ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಮ್ಯಾಕ್ರನ್ ಇಂದು ಪ್ರಮುಖ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಉಭಯ ನಾಯಕರು ಮಾರ್ಸಿಲೆಯಲ್ಲಿ ಭಾರತದ ಮೊದಲ ರಾಯಭಾರ ಕಚೇರಿಯನ್ನು ಜಂಟಿಯಾಗಿ ಉದ್ಘಾಟಿಸಲಿದ್ದಾರೆ. ಇದು ದಕ್ಷಿಣ ಫ್ರಾನ್ಸ್‌ನಲ್ಲಿ ಭಾರತೀಯ ಸಮುದಾಯಕ್ಕೆ ಕಾನ್ಸುಲರ್ ಸೇವೆಗಳನ್ನು ಹೆಚ್ಚಿಸುವುದಲ್ಲದೆ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ನಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ.

****************

ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರೆನ್ ಅವರು ವ್ಯಾಪಾರ ಸಂಬಂಧಗಳನ್ನು ಬಲಪಡಿಸುವ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ.

ನಿನ್ನೆ ಸಂಜೆ ಪ್ಯಾರಿಸ್ ನಲ್ಲಿ ನಡೆದ ೧೪ ನೇ ಭಾರತ-ಫ್ರಾನ್ಸ್ ಸಿಇಒಗಳ ವೇದಿಕೆಯನ್ನುದ್ದೇಶಿಸಿ ಮಾತನಾಡಿದರು. ಈ ವೇದಿಕೆಯು ರಕ್ಷಣಾ, ಏರೋಸ್ಪೇಸ್, ಕೃತಕ ಬುದ್ಧಿಮತ್ತೆ, ಮೂಲಸೌಕರ್ಯ ಮತ್ತು ಸುಸ್ಥಿರ ಅಭಿವೃದ್ಧಿಯಂತಹ ಪ್ರಮುಖ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸಿ ಎರಡೂ ದೇಶಗಳ ಉನ್ನತ ಉದ್ಯಮ ನಾಯಕರನ್ನು ಒಟ್ಟುಗೂಡಿಸಿತು.

ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ, ಜಾಗತಿಕ ಹೂಡಿಕೆ ಕೇಂದ್ರವಾಗಿ ಭಾರತದ ಹೆಚ್ಚುತ್ತಿರುವ ಆಕರ್ಷಣೆಯನ್ನು ಬಿಂಬಿಸಿದರು, ಅದರ ಸ್ಥಿರ ನೀತಿಗಳು ಮತ್ತು ಇತ್ತೀಚಿನ ಆರ್ಥಿಕ ಸುಧಾರಣೆಗಳಿಗೆ ಒತ್ತು ನೀಡಿದರು. ವಿಮಾ ವಲಯವನ್ನು ಶೇಕಡ ೧೦೦ ರಷ್ಟು ಎಫ್ ಡಿಐಗೆ ತೆರೆಯುವುದು, ನಾಗರಿಕ ಪರಮಾಣು ಶಕ್ತಿಯಲ್ಲಿ ಖಾಸಗಿ ಭಾಗವಹಿಸುವಿಕೆಗೆ ಅವಕಾಶ ನೀಡುವುದು ಮತ್ತು ವ್ಯಾಪಾರವನ್ನು ಸುಲಭಗೊಳಿಸಲು ತೆರಿಗೆ ರಚನೆಗಳನ್ನು ಸರಳೀಕರಿಸುವ ಬಗ್ಗೆ ಅವರು ಮಾತನಾಡಿದರು. ನಿಯಂತ್ರಕ ಸುಧಾರಣೆಗಳು ಭಾರತದ ಆರ್ಥಿಕ ಆಡಳಿತವನ್ನು ಹೆಚ್ಚು ವಿಶ್ವಾಸ ಆಧಾರಿತ ಮತ್ತು ಪರಿಣಾಮಕಾರಿಯನ್ನಾಗಿ ಮಾಡುತ್ತಿವೆ ಎಂದು ಇದೇ ವೇಳೆ ಅವರು ಗಮನಸೆಳೆದರು.

ರಕ್ಷಣೆ, ಇಂಧನ, ವಾಯುಯಾನ, ಬಾಹ್ಯಾಕಾಶ, ಫಿನ್ಟೆಕ್ ಮತ್ತು ಆರೋಗ್ಯ ರಕ್ಷಣೆಯಂತಹ ಕ್ಷೇತ್ರಗಳಲ್ಲಿ ಹೊಸ ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಪ್ರಧಾನಿ ಫ್ರಾನ್ಸ್ ಕಂಪನಿಗಳಿಗೆ ಆಹ್ವಾನ ನೀಡಿದರು.

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ವೇದಿಕೆಯನ್ನುದ್ದೇಶಿಸಿ ಮಾತನಾಡುತ್ತಾ, ಎಐ ಮತ್ತು ನಾವೀನ್ಯತೆಗೆ ಜಾಗತಿಕ, ಅಂತರ್ಗತ ವಿಧಾನದ ಮಹತ್ವವನ್ನು ಒತ್ತಿ ಹೇಳಿದರು.

****************

ಸಂತ ರವಿದಾಸ್ ಅವರ ಜನ್ಮದಿನವಾದ ರವಿದಾಸ್ ಜಯಂತಿಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ.

ಸಂತ ರವಿದಾಸರು ೧೪ ನೇ ಶತಮಾನದ ಸಂತ ಮತ್ತು ಉತ್ತರ ಭಾರತದಲ್ಲಿ ಭಕ್ತಿ ಚಳವಳಿಯ ಸ್ಥಾಪಕರಾಗಿದ್ದರು. ಹಿಂದೂ ಕ್ಯಾಲೆಂಡರ್ ಪ್ರಕಾರ ಮಾಘ ಮಾಸದ ಹುಣ್ಣಿಮೆಯ ದಿನವಾದ ಮಾಘ ಪೂರ್ಣಿಮಾದಂದು ಈ ದಿನವನ್ನು ಆಚರಿಸಲಾಗುತ್ತದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಈ ಸಂದರ್ಭದಲ್ಲಿ ಜನತೆಗೆ ಶುಭ ಕೋರಿದ್ದಾರೆ.

ಗುರು ರವಿದಾಸ್ ಜೀ ಅವರು ತಮ್ಮ ಬರಹಗಳ ಮೂಲಕ ಎಲ್ಲರಿಗೂ ಏಕತೆ ಮತ್ತು ಸಹೋದರತ್ವದ ಸಂದೇಶವನ್ನು ನೀಡಿದ ಮಹಾನ್ ಸಂತರಾಗಿದ್ದರು ಎಂದು ರಾಷ್ಟ್ರಪತಿ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

****************

ದೇಶದ ನಿವ್ವಳ ನೇರ ತೆರಿಗೆ ಸಂಗ್ರಹ ವರ್ಷದಿಂದ ವರ್ಷಕ್ಕೆ ಶೇಕಡ ೧೪.೬೯ ರಷ್ಟು ಬೆಳವಣಿಗೆಯನ್ನು ಕಂಡಿದ್ದು, ಇದು ಪ್ರಸಕ್ತ ಹಣಕಾಸು ವರ್ಷದಲ್ಲಿ ೧೭ ಲಕ್ಷ ೭೮ ಸಾವಿರ ಕೋಟಿ ರೂಪಾಯಿಗೆ ತಲುಪಿದೆ.

ಕೇಂದ್ರೀಯ ನೇರ ತೆರಿಗೆ ಮಂಡಳಿ ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ೨೦೨೩-೨೪ರ ಹಣಕಾಸು ವರ್ಷಕ್ಕೆ ಹೋಲಿಸಿದರೆ ಒಟ್ಟು ನೇರ ತೆರಿಗೆ ಸಂಗ್ರಹವು ಶೇಕಡ ೧೯ ಕ್ಕಿಂತ ಹೆಚ್ಚು ಬೆಳವಣಿಗೆ ಕಂಡು ಬಂದಿದೆ.

ವೈಯಕ್ತಿಕ ಆದಾಯ ತೆರಿಗೆ ಸಂಗ್ರಹವು ೯ ಲಕ್ಷ ೪೭ ಸಾವಿರ ಕೋಟಿ ರೂಪಾಯಿಗಳಿಗೆ ಏರಿದರೆ, ಕಾರ್ಪೊರೇಟ್ ತೆರಿಗೆ ಸಂಗ್ರಹವು ೭ ಲಕ್ಷ ೭೮ ಸಾವಿರ ಕೋಟಿ ರೂಪಾಯಿಗಳಿಗೆ ತಲುಪಿದೆ.

******************

ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ಅವರು ಪರೀಕ್ಷಾ ಪೇ ಚರ್ಚಾ-೨೦೨೫ ರ ಎರಡನೇ ಭಾಗದಲ್ಲಿ ಪಾಲ್ಗೊಂಡು, ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯದ ಮೇಲೆ ಗಮನ ಕೇಂದ್ರೀಕರಿಸಬೇಕು ಮತ್ತು ವೈಫಲ್ಯದ ಭಯವಿಲ್ಲದೆ ತಮ್ಮ ದೌರ್ಬಲ್ಯಗಳ ಮೇಲೆ ಕೆಲಸ ಮಾಡಬೇಕೆಂದು ಒತ್ತಾಯಿಸಿದ್ದಾರೆ.

ವಿದ್ಯಾರ್ಥಿಗಳೊಂದಿಗಿನ ಸಂವಾದದ ವೇಳೆ ಅವರು ವಿದ್ಯಾರ್ಥಿಗಳು ಸವಾಲುಗಳನ್ನು ಸ್ಪಷ್ಟತೆ ಮತ್ತು ದೃಢನಿಶ್ಚಯದಿಂದ ಎದುರಿಸಬೇಕು ಮತ್ತು ಯಾವುದೇ ತಪ್ಪು ಇದ್ದರೆ ಭಯಭೀತರಾಗಬಾರದು ಎಂದು ಹೇಳಿದರು.

ವಿದ್ಯಾರ್ಥಿಗಳೊಂದಿಗಿನ ಪ್ರಧಾನಿ ನರೇಂದ್ರ ಮೋದಿಯವರ ಸಂವಾದವನ್ನು ಉಲ್ಲೇಖಿಸಿದ ನಟಿ, ವಿದ್ಯಾರ್ಥಿಗಳು ತಮ್ಮ ಭಾವನೆಗಳನ್ನು ವ್ಯಕ್ತಪಡಿಸಬೇಕು ಮತ್ತು ಎಂದಿಗೂ ನಿಗ್ರಹಿಸಬಾರದು, ಅಗತ್ಯವಿದ್ದಾಗ ಕುಟುಂಬ ಮತ್ತು ಸ್ನೇಹಿತರೊಂದಿಗೆ ಮುಕ್ತವಾಗಿ ಮಾತನಾಡಬೇಕು ಎಂದು ಅವರು ಒತ್ತಾಯಿಸಿದರು.

ಮಾನಸಿಕ ಆರೋಗ್ಯ ವಕೀಲರೂ ಆಗಿರುವ ದೀಪಿಕಾ ಪಡುಕೋಣೆ, ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಕಳಂಕವೆಂದು ಪರಿಗಣಿಸಬಾರದು ಮತ್ತು ಅಂತಹ ಸಮಸ್ಯೆಗಳನ್ನು ಎದುರಿಸುತ್ತಿರುವ ಜನರು ಯಾವಾಗಲೂ ತಮ್ಮ ಭಾವನೆಗಳನ್ನು ವ್ಯಕ್ತಪಡಿಸಬೇಕು ಎಂದು ಹೇಳಿದ್ದಾರೆ.

ಧ್ವನಿ: ದೀಪಿಕಾ ಪಡುಕೋಣೆ, ನಟಿ ( ೨೭ ಸೆಕೆಂಡ್‌ಗಳು)

****************

ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಇಂದು ಮಾಘ ಪೂರ್ಣಿಮೆಯ ವಿಶೇಷ ಅಮೃತ ಸ್ನಾನ ನಡೆಯುತ್ತಿದೆ.

ಈ ದಿನವು, ಅತ್ಯಂತ ಪ್ರಶಸ್ತ್ಯವಾಗಿದ್ದು, ೧೦ ಲಕ್ಷಕ್ಕೂ ಹೆಚ್ಚು ಕಲ್ಪವಾಸಿಗಳು ಭಾಗವಹಿಸಿದ್ದಾರೆ. ಸಂಪ್ರದಾಯಗಳ ಪ್ರಕಾರ, ಮಾಘ ಪೂರ್ಣಿಮೆಯ ದಿನದಂದು ಪ್ರಯಾಗರಾಜ್‌ನ ಸಂಗಮದ ದಡದಲ್ಲಿ ವಿಶೇಷ ಆಚರಣೆಗಳನ್ನು ಕೈಗೊಳ್ಳುವುದರಿಂದ ಸಾವಿರ ವರ್ಷಗಳ ತಪಸ್ಸಿನ ಫಲ ಸಿಗುತ್ತದೆ ಎಂದು ನಂಬಿಕೆ ಇದೆ. ಮಹಾ ಕುಂಭದಲ್ಲಿ ವಿಶೇಷ ಪೂಜಾ ಕೈಂಕರ್ಯಗಳನ್ನು ಕೈಗೊಳ್ಳುವುದು ಫಲಪ್ರದವೆಂದು ಪರಿಗಣಿಸಲಾಗಿದೆ.

ವಿಶ್ವದ ಅತಿದೊಡ್ಡ ಮಹಾಕುಂಭ ಮೇಳದಲ್ಲಿ ಇಲ್ಲಿಯವರೆಗೆ ೪೯ ಕೋಟಿಗೂ ಹೆಚ್ಚು ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ.

****************

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ನಡೆಯುತ್ತಿರುವ ಏರೋ ಇಂಡಿಯಾ ೨೦೨೫ ಬೃಹತ್ ವೈಮಾನಿಕ ಮೇಳ ಮೂರನೇ ದಿನವಾದ ಇಂದು ಸಹ ಮುಂದುವರಿಯಲಿದೆ.

ಇಂದು ಮಧ್ಯಾಹ್ನ ಸೂರ್ಯಕಿರಣ್ ಸೇರಿದಂತೆ ಹಲವು ವಿಶೇಷ ವಿಮಾನಗಳ ವೈಮಾನಿಕ ಪ್ರದರ್ಶನ ನಡೆಯಲಿದೆ. ಜೊತೆಗೆ ವ್ಯಾಪಾರಕ್ಕೆ ಸಂಬಂಧಿಸಿದಂತೆ ಹಲವು ನಿಯೋಗ ಮಟ್ಟದ ಮಾತುಕತೆಗಳು ನಡೆಯಲಿವೆ.

ನಾಳೆ ಮತ್ತು ನಾಡಿದ್ದು ಸಾರ್ವಜನಿಕರ ಏರ್ ಶೋ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದೆ.

****************

ಲಾಮ್ ರಿಸರ್ಚ್ ಭಾರತದಲ್ಲಿ ೧೦ ಸಾವಿರ ಕೋಟಿ ರೂಪಾಯಿಗಳ ಪ್ರಮುಖ ಹೂಡಿಕೆಯನ್ನು ಘೋಷಿಸಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿರುವ ಅವರು, ವೈಷ್ಣವ್, ಇದು ಭಾರತದ ಅರೆವಾಹಕ ಪ್ರಯಾಣದಲ್ಲಿ ಮತ್ತೊಂದು ಮೈಲಿಗಲ್ಲಾಗಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಸೆಮಿಕಂಡಕ್ಟರ್ ದೃಷ್ಟಿಕೋನದಲ್ಲಿದೊಡ್ಡ ವಿಶ್ವಾಸದ ಮತವಾಗಿದೆ ಎಂದು ಅವರು ಹೇಳಿದರು.

ಲ್ಯಾಮ್ ರಿಸರ್ಚ್ ಯುಎಸ್ ಮೂಲದ ಜಾಗತಿಕ ಪೂರೈಕೆದಾರನಾಗಿದ್ದು, ಅರೆವಾಹಕ ಉದ್ಯಮಕ್ಕೆ ವೇಫರ್-ಫ್ಯಾಬ್ರಿಕೇಷನ್ ಉಪಕರಣಗಳು ಮತ್ತು ಸಂಬಂಧಿತ ಸೇವೆಗಳನ್ನು ಒದಗಿಸುತ್ತದೆ.

ಜನವರಿ ೧೯೮೦ ರಲ್ಲಿ ಸ್ಥಾಪನೆಯಾದ ಲ್ಯಾಮ್ ರಿಸರ್ಚ್ ಪ್ರಸ್ತುತ ವಿಶ್ವದ ಪ್ರಮುಖ ಅರೆವಾಹಕ ಕಂಪನಿಯಾಗಿದೆ.

****************

ಚೀನಾದ ಕಿಂಗ್ಡಾವೊದಲ್ಲಿ ನಡೆಯುತ್ತಿರುವ ಏಷ್ಯಾ ಮಿಶ್ರ ತಂಡ ಬ್ಯಾಡ್ಮಿಂಟನ್ ಚಾಂಪಿಯನ್ ಷಿಪ್‌ನಲ್ಲಿಂದು ಭಾರತ, ಮಕಾವು ವಿರುದ್ಧ ೫-೦ ಅಂತರದಿಂದ ಜಯಗಳಿಸುವ ಮೂಲಕ ತನ್ನ ಅಭಿಯಾನವನ್ನು ಪ್ರಾರಂಭಿಸಿದೆ.

ಮಿಶ್ರ ಡಬಲ್ಸ್ ನಲ್ಲಿ ಸತೀಶ್ ಕುಮಾರ್ ಕರುಣಾಕರನ್ ಮತ್ತು ಆದ್ಯ ವರಿಯತ್ ಜೋಡಿ, ಪುರುಷರ ಸಿಂಗಲ್ಸ್‌ನಲ್ಲಿ ಲಕ್ಷ್ಯ ಸೇನ್ ಜಯ ಗಳಿಸಿದರು.

ಮಹಿಳೆಯರ ಸಿಂಗಲ್ಸ್‌ನಲ್ಲಿ ಮಾಳವಿಕಾ ಬನ್ಸೋಡ್, ಪುರುಷರ ಡಬಲ್ಸ್‌ನಲ್ಲಿ ಎಂ.ಆರ್.ಅರ್ಜುನ್ ಮತ್ತು ಚಿರಾಗ್ ಶೆಟ್ಟಿ ಜಯ ಗಳಿಸಿದರೆ, ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ತ್ರಿಶಾ ಜೊಲ್ಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಜಯ ಸಾಧಿಸಿದರು.

****************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ಮಧ್ಯಾಹ್ನ ನಡೆಯಲಿರುವ ೩ ಪಂದ್ಯಗಳ ಏಕದಿನ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೧.೩೦ಕ್ಕೆ ಆರಂಭವಾಗಲಿದೆ.

ಈಗಾಗಲೇ ಸರಣಿಯನ್ನು ೨-೦ ಮುನ್ನಡೆಯೊಂದಿಗೆ ಗೆದ್ದುಕೊಂಡಿರುವ ಆತಿಥೇಯರು, ಇಂದಿನ ಪಂದ್ಯವನ್ನು ಸಹ ಗೆದ್ದು ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವ ಗುರಿಯನ್ನು ಹೊಂದಿದ್ದಾರೆ.

*****************

ಅರುಣಾಚಲ ಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರಿ ಮಳೆ ಅಥವಾ ಹಿಮಪಾತವಾಗಲಿದೆ ಎಂದು ಭಾರತ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಅರುಣಾಚಲ ಪ್ರದೇಶ, ಅಸ್ಸಾಂ ಮತ್ತು ಮೇಘಾಲಯದ ಕೆಲವು ಭಾಗಗಳಲ್ಲಿ ಇಂದು ಗುಡುಗು, ಮಿಂಚು ಸಹಿತ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

*********ಮುಕ್ತಾಯ*********